# ಮೊಟ್ಟೆತ್ತಡ: ಗೇರು ಸಂಶೋಧನಾ ನಿರ್ದೇಶನಾಲಯದಲ್ಲಿ ಪರಿಶಿಷ್ಟ ಜಾತಿಯ 49 ಫಲಾನುಭವಿಗಳಿಗೆ ನೀರಿನ ಟ್ಯಾಂಕ್ ವಿತರಣೆ



ಪುತ್ತೂರು: ಮೊಟ್ಟೆತ್ತಡ್ಕ-ಕೆಮ್ಮಿಂಜೆಯ ಗೇರು ಸಂಶೋಧನಾ ನಿರ್ದೇಶನಾಲಯದಲ್ಲಿ ಪರಿಶಿಷ್ಟಜಾತಿ ಉಪಯೋಜನೆ ಅಡಿಯಲ್ಲಿ 49 ಪರಿಶಿಷ್ಟ ಜಾತಿಯ ಫಲಾನುಭವಿಗಳಿಗೆ ಶುದ್ಧ ಕುಡಿಯುವ ನೀರು ಸಂಗ್ರಹಿಸುವ ನೀರಿನ ಟ್ಯಾಂಕ್ ಗಳನ್ನು ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ, ಕೊರೋನಾ ರೋಗದ ಹರಡುವಿಕೆಯ ಹಿನ್ನೆಲೆಯಲ್ಲಿ ಲಾಕ್ ಡೌನ್ ನಿಯಮದಂತೆ ಮಾಸ್ಕ್ ಧರಿಸಿ, ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳಲಾಗಿತ್ತು. ಸಂಸ್ಥೆಯ ಪ್ರಭಾರ ನಿರ್ದೇಶಕರಾದ ಡಾ। ಗಂಗಾಧರ ನಾಯಕ್ ಫಲಾನುಭವಿಗಳಿಗೆ ಟ್ಯಾಂಕ್ ವಿತರಿಸಿದರು. ಬಳಿಕ ಮಾತನಾಡಿದ ಗಂಗಾಧರ ನಾಯಕ್‌ರವರು, ಈ ಆರ್ಥಿಕ ವರ್ಷದಲ್ಲಿ ಕೇಂದ್ರದಿಂದ ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಗಿರಿಜನ ಉಪಯೋಜನೆ ಸೌಲಭ್ಯಗಳನ್ನು ಮುಂದುವರೆಸಲಾಗುವುದು. ಹಾಗೂ ಅರ್ಹರನ್ನು ಗುರುತಿಸಿ ಯೋಜನೆಗಳ ಸೌಲಭ್ಯಗಳನ್ನು ಕೊಡಲಾಗುವುದು ಎಂದು ತಿಳಿಸಿದರು. ಇವತ್ತು 49 ಮಂದಿಗೆ ಟ್ಯಾಂಕ್ ವಿತರಿಸಲಾಗಿದೆ. ಇನ್ನೂ ಹಲವು ಫಲಾನುಭವಿಗಳಿಗೆ ಟ್ಯಾಂಕ್ ವಿತರಿಸಲು ಇದೆ ಎಂದು ಅವರು ಹೇಳಿದರು. ಪರಿಶಿಷ್ಟ ಜಾತಿ ಉಪಯೋಜನೆಯ ಸಂಚಾಲಕ, ನಿರ್ದೇಶನಾಲಯದ ವಿಜ್ಞಾನಿ ಡಾ। ಈರದಾಸಪ್ಪ, ಕ್ಷೇತ್ರಾಧಿಕಾರಿ ಮುರಳೀಕೃಷ್ಣ ಮತ್ತಿತರರು ಹಾಜರಿದ್ದರು.